ವಸುಧೈವ ಕುಟುಂಬಕಂ

ಒಂದು ಭೂಮಿ • ಒಂದು ಕುಟುಂಬ • ಒಂದು ಭವಿಷ್ಯ

ಕರ್ನಾಟಕ ಸರ್ಕಾರ

# ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು-560009.

ಸಂಖ್ಯೆ:ಕೆಪಿಆರ್‌ಸಿ-ಜಿಪಿಎ/463/2023 ದಿನಾಂಕ:01.01.2024

**ಇವರಿಗೆ,**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೇ,

ವಿಷಯ: ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗಳಿಗೂ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳುವ ಸೂಚನೆಯನ್ನು ಮುಂದಿನ ನಿರ್ದೇಶನ ನೀಡುವವರೆಗೂ ತಾತ್ಕಾಲಿಕವಾಗಿ ವಿಲೇ ಇಡುವ ಕುರಿತು.

ಉಲ್ಲೇಖ: 1.ಸರ್ಕಾರದ ಆದೇಶ ಸಂಖ್ಯೆ :ಗ್ರಾಅಪ 886 ಗ್ರಾಪಕಾ 2016, ದಿ:29-09-2020.

2. ಕೆಪಿಆರ್‌ಸಿ ಆದೇಶಸಂಖ್ಯೆ:ಕೆಪಿಆರ್‌ಸಿ-ಜಿಪಿಎ/463/2023, ದಿ :21.10.2023.

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖ (1) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು, ನಿಯಮಗಳು)2020 ರಂತೆ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕಾತಿ ವಿಧಾನ, ವಿದ್ಯಾರ್ಹತೆ, ಆಯ್ಕೆ ಸಮಿತಿ ನಿಗಧಿಪಡಿಸಿ ಆದೇಶಿಸಲಾಗಿರುತ್ತದೆ. ಉಲ್ಲೇಖ (2) ರಲ್ಲಿ ಡಾಟಾ ಎಂಟ್ರಿ ಆಪರೇಟರ್‌ಗಳ ನೇರ ನೇಮಕಾತಿಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಜಿಲ್ಲೆಯನ್ನು ಒಂದು ಜೇಷ್ಠತಾ ಘಟಕವೆಂದು ಪರಿಗಣಿಸಿ ಉಲ್ಲೇಖ (1) ರಲ್ಲಿ ನಿರ್ದೇಶಿಸಿರುವಂತೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯ ಸಮಿತಿಯಲ್ಲಿ ಆಯ್ಕೆ ಮಾಡಿಕೊಳ್ಳತಕ್ಕದ್ದು ಹಾಗೂ ಸದರಿ ಹುದ್ದೆಗೆ ಆಯ್ಕೆಯಾದ ನೌಕರರಿಗೆ ಬಾಪೂಜಿ ಸೇವಾ ಕೇಂದ್ರದಲ್ಲಿ ಸಂಗ್ರಹವಾಗುವ ಮೊತ್ತದಿಂದ ವೇತನವನ್ನು ಪಾವತಿಸಲು ಆದೇಶ ಹೊರಡಿಸಲಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು-2020 ರಲ್ಲಿ ಡಾಟಾ ಎಂಟ್ರಿ ಆಪರೇಟರ್ ಗಳಿಗೆ ಸಂಬಂದಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೂಕ್ತ ತಿದ್ದುಪಡಿ ತರಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುವುದರಿಂದ ಸದರಿ ಉಲ್ಲೇಖ (2) ರಲ್ಲಿನ ಸೂಚನೆಯನ್ನು ಮುಂದಿನ ನಿರ್ದೇಶನ ನೀಡುವವರೆಗೂ ತಾತ್ಕಾಲಿಕವಾಗಿ ವಿಲೇ ಇಡಲು ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು (ಆ-1),
ಕರ್ನಾಟಕ ಪಂಚಾಯತ್ ರಾಜ್
ಆಯುಕ್ತಾಲಯ.

01/01/2024

**ಪ್ರತಿ:**

1. ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು ರವರ ಮಾಹಿತಿಗಾಗಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಮಾಹಿತಿಗಾಗಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಮಾಹಿತಿಗಾಗಿ.
4. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಶಾಖೆಗೆ ಮಾಹಿತಿಗಾಗಿ.
5. ವೆಬ್ ಸೈಟ್ ಪ್ರತಿ/ಸಂಪಾದಕರು ಕರ್ನಾಟಕ ವಿಕಾಸ ಪತ್ರಿಕೆ.
6. ಕಚೇರಿ ಪ್ರತಿ.